ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಐದನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 10ನೇ ಅಕ್ಟೋಬರ್, 2019
(ಸಮಯ: ಬೆಳಿಗ್ಗೆ 11.00 ಗಂಟೆಗೆ)

---

1. ಸಂತಾಪ ಸೂಚನೆ

2. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:-

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಗಳು / ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

3. ವರದಿಗಳನ್ನೊಪ್ಪಿಸುವುದು

1) ಶ್ರೀ ಅರಗ ಜ್ಞಾನೇಂದ್ರ (ಅಧ್ಯಕ್ಷರು, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ) ಅವರು 2018-19ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 28ನೇ ವರದಿಯನ್ನೊಪ್ಪಿಸುವುದು.

2) ಶ್ರೀ ಎಸ್. ಅಂಗಾರ (ಅಧ್ಯಕ್ಷರು, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ) ಅವರು 2018-19ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2ನೇ ವರದಿಯನ್ನೊಪ್ಪಿಸುವುದು.

... 2/ ..

4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

I. ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) ಅವರು:

ಅ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 2017–18ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಸಂಪುಟ 1 ಮತ್ತು 2) ಸಭೆಯ ಮುಂದಿಡುವುದು.

ಆ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಮಾರ್ಚ್ 2018ಕ್ಕೆ ಕೊನೆಗೊಂಡ ವರ್ಷದ ಈ ಕೆಳಕಂಡ ವರದಿಗಳನ್ನು ಸಭೆಯ ಮುಂದಿಡುವುದು:

1) ರಾಜಸ್ವ ವಲಯದ ಮೇಲಿನ ವರದಿ (2019ನೇ ವರ್ಷದ ವರದಿ ಸಂಖ್ಯೆ–1)

2) ಆರ್ಥಿಕ ವಲಯದ ಮೇಲಿನ ವರದಿ (2019ನೇ ವರ್ಷದ ವರದಿ ಸಂಖ್ಯೆ–3)

II. ಸದಸ್ಯರಿಗೆ ಈಗಾಗಲೇ ಕಳುಹಿಸಲಾಗಿರುವ ಮೊದಲನೇ ಹಾಗೂ ಎರಡನೇ ಪಟ್ಟಿಯ ರೀತ್ಯಾ.

5. ವಿತ್ತೀಯ ಕಾರ್ಯಕಲಾಪಗಳು

ಅ) 2019–20ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮಂಡನೆ ಹಾಗೂ ಚರ್ಚೆ:

ಬೇಡಿಕೆ ಸಂಖ್ಯೆ	ಬೇಡಿಕೆಯ ಹೆಸರು
01	ಕೃಷಿ ಮತ್ತು ತೋಟಗಾರಿಕೆ
02	ಪಶುಸಂಗೋಪನೆ ಮತ್ತು ಮೀನುಗಾರಿಕೆ
03	ಆರ್ಥಿಕ
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
05	ಒಳಾಡಳಿತ ಮತ್ತು ಸಾರಿಗೆ
06	ಮೂಲಭೂತ ಸೌಕರ್ಯ ಅಭಿವೃದ್ಧಿ
07	ಗ್ರಾಮೀಣಾ ಅಭಿವೃದ್ಧಿ ಮತ್ತು ಪಂಚಾಯತಿ ರಾಜ್
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
09	ಸಹಕಾರ
10	ಸಮಾಜ ಕಲ್ಯಾಣ

... 3/ ..

11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು
13	ಆಹಾರ ಮತ್ತು ನಾಗರೀಕ ಸರಬರಾಜು
14	ಕಂದಾಯ
15	ಮಾಹಿತಿ ತಂತ್ರಜ್ಞಾನ
16	ವಸತಿ
17	ಶಿಕ್ಷಣ
18	ವಾಣಿಜ್ಯ ಮತ್ತು ಕೈಗಾರಿಕೆ
19	ನಗರಾಭಿವೃದ್ಧಿ
20	ಲೋಕೋಪಯೋಗಿ
21	ಜಲಸಂಪನ್ಮೂಲ
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
23	ಕಾರ್ಮಿಕ ಮತ್ತು ಕೌಶಲ್ಯ ಅಭಿವೃದ್ಧಿ
24	ಇಂಧನ
25	ಕನ್ನಡ ಮತ್ತು ಸಂಸ್ಕೃತಿ
26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ

ಆ) 2019–20ನೇ ಸಾಲಿನ ಪೂರಕ ಅಂದಾಜುಗಳ (ಎರಡನೇ ಕಂತು) ಮಂಡನೆ ಹಾಗೂ ಚರ್ಚೆ.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm